2002ನೇ ಮಾರ್ಚ್ ಒಳಗೆ ಮುಗಿಸಬೇಕೆಂದು ಕಾಲವನ್ನು ಕೂಡ ನಿಗದಿ ಮಾಡಿದ್ದೇವೆ.

(ಅ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ಡಿ.ಬಿ.ಚಂದ್ರೇಗೌಡ(ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು): ದಿನಾಂಕ 22ನೇಮಾರ್ಚ್ 2001ರ ಮೂರನೆ ಪಟ್ಟಿಯಲ್ಲಿನ ಲಿಖಿತ ಮೂಲಕ ಉತ್ತರಿಸುವ 98 ಪ್ರಶ್ನೆಗಳ ಪೈಕಿ 88 ಪ್ರಶ್ನೆಗಳಿಗೆ ಉತ್ತರವನ್ನು ಸದನದಲ್ಲಿ ಮಂಡಿಸುತ್ತೇನೆ.

ಖಾಸಗಿ ವಿದ್ಯಾರ್ಥಿನಿಲಯಗಳಲ್ಲಿನ ನೌಕರರ ವೇತನ.

243(84)

ಶ್ರೀ ಅಂಜನಮೂರ್ತಿ(ನೆಲಮಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಖಾಸಗಿ ವಿದ್ಯಾರ್ಥಿನಿಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರ ಮಾಸಿಕ ವೇತನ ಬಹಳ ಕಡಿಮೆ ಇರುವುದರಿಂದ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರದ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುತ್ತಿರುವ ನೌಕರರ ವೇತನಕ್ಕೆ ಸರಿಸಮಾನ ವೇತನವನ್ನು ಖಾಸಗಿಯವರು ನಡೆಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೂ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ಅನುದಾನಿತ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುತ್ತಿರುವ ನೌಕರರಿಗೆ ಗೌರವಧನ ನೀಡುವ ಸಲುವಾಗಿ ಈ ಕೆಳಕಂಡ ದರಗಳಲ್ಲಿ ಅನುದಾನವನ್ನು ಸಂಬಂಧಪಟ್ಟ ಸಂಸ್ಥೆಗಳಿಗೆ ನೀಡಲಾಗುತ್ತಿದೆ.:

1) ವಿದ್ಯಾರ್ಥಿನಿಲಯ ಮೇಲ್ವಿಚಾರಕರು - ತಿಂಗಳಿಗೆ ರೂ. 125ರಂತೆ 12 ತಿಂಗಳುಗಳು.

2) ಅಡಿಗೆಯವರು - ತಿಂಗಳಿಗೆ ರೂ. 100ರಂತೆ 12 ತಿಂಗಳುಗಳು

3) ಅಡಿಗೆ ಸಹಾಯಕರು - ತಿಂಗಳಿಗೆ 75ರಂತೆ 12 ತಿಂಗಳುಗಳು

ಆ) ಖಾಸಗಿ ಅನುದಾನಿತ ವಿದ್ಯಾರ್ಥಿನಿಲಯದಲ್ಲಿ ಕೆಲಸ ಮಾಡುತ್ತಿರುವ ನೌಕರರಿಗೆ ಸರ್ಕಾರಿ ನೌಕರರ ವೇತನಕ್ಕೆ ಸಮನಾಗಿ ವೇತನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಮುನ್ಸಿಪಾಲಿಟಿಗಳನ್ನು ಪುರಸಭೆಗಳನ್ನಾಗಿ ಪರಿವರ್ತಿಸುವುದು.

244(89)

ಶ್ರೀ ಅಂಜನಮೂರ್ತಿ(ನೆಲಮಂಗಲ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಒಟ್ಟು ಎಷ್ಟು ಪಟ್ಟಣ ಪಂಚಾಯತಿಗಳಿವೆ?

ಆ) ಪುರಸಭೆಗಳನ್ನಾಗಿ ಮಾರ್ಪಾಡು ಮಾಡಲು ಜನಸಂಖ್ಯೆ ಪ್ರಮಾಣ ಎಷ್ಟಿರಬೇಕು?

ಇ) ಜನಸಂಖ್ಯೆಗನುಗುಣವಾಗಿ ಈಗಾಗಲೇ ಜನಸಂಖ್ಯೆ ಮೀರಿರುವ ಅಥವಾ ಸಮನಾಗಿರುವ ಪಟ್ಟಣ ಪಂಚಾಯತಿಗಳನ್ನು ಪುರಸಭೆಗಳನ್ನಾಗಿ ಪರಿವರ್ತಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಈ) ಈಗಾಗಲೇ ರಾಜ್ಯದಲ್ಲಿ ಎಷ್ಟು ಪಟ್ಟಣ ಪಂಚಾಯತಿಗಳನ್ನು ಪುರಸಭೆಯನ್ನಾಗಿ ಮಾರ್ಪಾಡು ಮಾಡಲಾಗಿದೆ. (ತಾಲ್ಲೂಕುವಾರು ವಿವರ ನೀಡುವುದು)

ಶ್ರೀ ಮಲ್ಲಿಕಾರ್ಜುನನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು):

ಅ) 89

ಆ) ಕನಿಷ್ಟ 20,000. ಆದರೆ ನಗರ ಸ್ಥಳೀಯ ಸಂಸ್ಥೆಯೊಂದನ್ನು ಪುರಸಭೆಯಾಗಿ ಮಾರ್ಪಾಡಿಸುವಲ್ಲಿ ಈ ಕೆಳಕಂಡ ನಿಬಂಧನೆಗಳನ್ನು ಪೂರೈಸಬೇಕು.